ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1861
ಸದಸ್ಯರ ಹೆಸರು	:	ಶ್ರೀ ಎನ್. ರವಿಕುಮಾರ್
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು
ಉತ್ತರಿಸುವ ದಿನಾಂಕ	:	24.03.2020.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಅಡಿಕೆ ಬೆಳೆಗಾರರ ಸಮಸ್ಯೆ ಪರಿಹರಿಸಲು ಟಾಸ್ಕ್ ಫೋರ್ಸ್ ರಚಿಸಲಾಗಿದೆಯೇ; ರಚಿಸಲಾಗಿದ್ದಲ್ಲಿ, ಯಾವಾಗಿನಿಂದ ಅಸ್ತಿತ್ವಕ್ಕೆ ಬಂದಿದೆ;	ಅಡಿಕೆ ಬೆಳೆಗಾರರ ಸಮಸ್ಯೆ ಪರಿಹರಿಸಲು ಟಾಸ್ಕ್ ಫೋರ್ಸ್ ಸರ್ಕಾರದ ಆದೇಶ ಸಂಖ್ಯೆ: ತೋಇ/131/ತೋಸಪಿ/2019, ಬೆಂಗಳೂರು, ದಿ:29.11.2019 ರನ್ವಯ ರಚಿಸಲಾಗಿದೆ. ದಿನಾಂಕ 29.11.2019 ರಿಂದ ಸದರಿ ಟಾಸ್ಕ್ ಫೋರ್ಸ್ ಅಸ್ತಿತ್ವಕ್ಕೆ ಬಂದಿರುತ್ತದೆ.
ಆ)	ಅಡಿಕೆ ಟಾಸ್ಕ್ ಫೋರ್ಸ್ ರಚನೆಯ ಉದ್ದೇಶ ಮತ್ತು ಕಾರ್ಯಸೂಚಿಗಳೇನು;	ಅಡಿಕೆಗೆ ಸಂಬಂಧಿಸಿದ ಬಿಕ್ಕಟ್ಟುಗಳನ್ನು ಮತ್ತು ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವ ಉದ್ದೇಶದಿಂದ ಸದರಿ ಅಡಿಕೆ ಕಾರ್ಯಪಡೆಯನ್ನು ರಚಿಸಲಾಗಿದೆ. **ಅಡಿಕೆ ಟಾಸ್ಕ್ ಫೋರ್ಸ್ ನ ಕಾರ್ಯಸೂಚಿಗಳು:** (1) ಅಡಿಕೆಗೆ ಸಂಬಂಧಿಸಿದ ಬಿಕ್ಕಟ್ಟುಗಳನ್ನು ಹಾಗೂ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಲು ಸೂಕ್ತ ಕ್ರಮಗಳನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು. (2) ಸರ್ವೋಚ್ಚ ನ್ಯಾಯಾಲಯದಲ್ಲಿರುವ ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ವಿಷಯದ ಪ್ರಕರಣಕ್ಕೆ ಸಂಬಂಧಿಸಿದಂತೆ ನಿರಂತರವಾಗಿ ಅಡಿಕೆ ಬೆಳೆಗಾರರ ಪರವಾಗಿ ಕೇಂದ್ರ ಸರ್ಕಾರಕ್ಕೆ ಮಾಹಿತಿಯನ್ನು ಒದಗಿಸುವುದು. (3) ಅಡಿಕೆಯಲ್ಲಿ ಆರೋಗ್ಯಕ್ಕೆ ಹಾನಿಕಾರಕವಾದ ಅಂಶ ಇರುವುದಿಲ್ಲವೆಂದು ದೃಢೀಕರಿಸುವ ವೈದ್ಯಕೀಯ ವರದಿಗಳನ್ನು ಸಿದ್ಧಪಡಿಸಲು ಕ್ರಮವಹಿಸಿ ಸಲ್ಲಿಸುವುದು. (4) ಸರ್ಕಾರವು ಅಡಿಕೆ ಬೆಳೆಗೆ ಸಂಬಂಧಿಸಿದಂತೆ ಈ ಕಾರ್ಯಪಡೆಗೆ ವಹಿಸುವ ಯಾವುದೇ ಜವಾಬ್ದಾರಿಯನ್ನು ನಿರ್ವಹಿಸುವುದು.

ಇ)	ಅಡಿಕೆ ಬೆಳೆಯಿಂದ ರಾಜ್ಯ ಸರ್ಕಾರಕ್ಕೆ ಎಷ್ಟು ಮೊತ್ತದ ಆದಾಯ ಬರುತ್ತದೆ: ಅಡಿಕೆ ಟಾಸ್ಕ್ ಫೋರ್ಸ್ ಒದಗಿಸಲಾಗಿರುವ ಅನುದಾನ ಎಷ್ಟು: ಈ ಮೊತ್ತವನ್ನು ಯಾವ ಯಾವ ಕಾರ್ಯಗಳಿಗೆ ವೆಚ್ಚ ಮಾಡಲಾಗುತ್ತದೆ?	ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಂದ 2018-19 ನೇ ಸಾಲಿನಲ್ಲಿ ಅಡಿಕೆ ಉತ್ಪನ್ನಕ್ಕೆ ಒಟ್ಟು ರೂ. 122.91ಕೋಟಿ ಮಾರುಕಟ್ಟೆ ಶುಲ್ಕ ಸಂಗ್ರಹವಾಗಿರುತ್ತದೆ. ಅಡಿಕೆ ಟಾಸ್ಕ್ ಫೋರ್ಸ್ ಗೆ ಅನುದಾನ ಒದಗಿಸಲಾಗಿರುವುದಿಲ್ಲ. ಸದರಿ ಟಾಸ್ಕ್ ಫೋರ್ಸ್ ಗೆ ರೂ.10.00 ಕೋಟಿಗಳ ಅನುದಾನವನ್ನು ಅಂದಾಜು ಮಾಡಲಾಗಿದೆ. **ಸದರಿ ಅನುದಾನವನ್ನು ಈ ಕೆಳಕಂಡ ಬಾಬ್ತುಗಳಿಗೆ ವಿನಿಯೋಗಿಸಲು ಉದ್ದೇಶಿಸಲಾಗಿದೆ.** • ಅಡಿಕೆಯು ಆರೋಗ್ಯಕ್ಕೆ ಹಾನಿಕಾರಕವಲ್ಲವೆಂದು ದೃಢೀಕರಿಸುವ ವೈದ್ಯಕೀಯ ವರದಿಗಳನ್ನು ಸಿದ್ಧಪಡಿಸಲು ಹಾಗೂ ಸಂಶೋಧನೆಗೆ ತಗಲುವ ಅಗತ್ಯ ಬಾಬ್ತು. • ಸರ್ವೋಚ್ಚ ನ್ಯಾಯಾಲಯದಲ್ಲಿರುವ ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ವಿಷಯದ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯದಿಂದ ಪ್ರತಿನಿಧಿಸುವ ವಕೀಲರಿಗೆ ಪಾವತಿಸುವ ಬಾಬ್ತು. • ಕಾರ್ಯಪಡೆಯ ವಿವಿಧ ಕಾರ್ಯಗಳನ್ನು ನಿರ್ವಹಿಸಲು ಅವಶ್ಯವಿರುವ ಸಿಬ್ಬಂದಿಗಳ ಖರ್ಚು, ಸಭೆ ಹಾಗೂ ಇತರೆ ವೆಚ್ಚಗಳ ಬಾಬ್ತು.

HORTI 183 HGM 2020

(ನಾರಾಯಣಗೌಡ)

ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು